ಬರುವ ಅನಾರೋಗ್ಯದ ಸೂಚನೆಗಳನ್ನು ಗುರುತಿಸಿ ಸಕಾಲದಲ್ಲಿ ಸೂಕ್ತ ಆಸ್ಪತ್ರೆಗಳಿಗೆ ಕರೆದೊಯ್ಯುತ್ತಿದ್ದಾರೆ ಮತ್ತು ಎದೆ ಹಾಲಿನ ಬಗ್ಗೆ ವಿವರವಾದ ತಿಳುವಳಿಕೆಯನ್ನು ನೀಡುತ್ತಿದ್ದಾರೆ. ಏಕೆಂದರೆ ಮಗು 6 ತಿಂಗಳವರೆಗೆ ಎದೆ ಹಾಲನ್ನು ಕುಡಿದರೆ ಮಗುವಿಗೆ ಪ್ರತಿರೋಧಕ ಶಕ್ತಿ ಹೆಚ್ಚಾಗಿ ಸೋಂಕುಗಳನ್ನು ತಡೆಗಟ್ಟುವಲ್ಲಿ ಯಶಸ್ವಿಯಾಗುತ್ತದೆ.

ಕೆಲವೊಮ್ಮೆ ಹುಟ್ಟಿನಿಂದ ಬರುವ (Major congenital anamaly) ಗಂಡಾಂತರ ಕಾಯಿಲೆಗಳಿಂದ ಶಿಶು ಮರಣದ ಪ್ರಮಾಣವನ್ನು ಕಡಿಮೆ ಮಾಡಲು ಬರುವುದಿಲ್ಲ.

ಊ) ರಾಜ್ಯದಲ್ಲಿ ಎರಡು ವರ್ಷಗಳಲ್ಲಿ ಪ್ರತಿ ಜಿಲ್ಲೆಗೆ ವೆಚ್ಚ ಮಾಡಲಾದ ಹಣದ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ

ಕಾಲೇಜುಗಳಿಗೆ ಕೇಂದ್ರ ಸರ್ಕಾರದ ಅನುದಾನ

501(967); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿ ನಗರ)

ಅ) ರಾಜ್ಯದಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಕಳೆದ ಮೂರು ವರ್ಷಗಳಲ್ಲಿ ನೂತನ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರದಿಂದ ಮಂಜೂರಾದ ಅನುದಾನವೆಷ್ಟು; (ವಿವರ ನೀಡುವುದು)

ಇ) ಸದರಿ ಕೇಂದ್ರ ಸರ್ಕಾರದ ಅನುದಾನವನ್ನು ಸಮರ್ಥವಾಗಿ ಬಳಸಿಕೊಳ್ಳಲಾಗಿದೆಯೇ, (ವಿವರ ನೀಡುವುದು);

ಈ) ಹೊಸ ವೈದ್ಯ ಕಾಲೇಜುಗಳಲ್ಲಿ ಪ್ರಸ್ತುತ ಖಾಲಿ ಇರುವ ವೈದ್ಯರುಗಳ ಮತ್ತು ಉಪನ್ಯಾಸಕರುಗಳ ಹುದ್ದೆಗಳೆಷ್ಟು; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ: ಶರಣಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಮಂಜೂರಾಗಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಹೊಸ ವೈದ್ಯ ಕಾಲೇಜುಗಳಲ್ಲಿ ಪ್ರಸ್ತುತ ಖಾಲಿ ಇರುವ ವೈದ್ಯರುಗಳ ಮತ್ತು ಉನ್ಯಾಸಕರುಗಳ/ಸಹಾಯಕ ಪ್ರಾಧ್ಯಾಪಕರುಗಳ ಹುದ್ದೆಗಳ ವಿವರ ಕೆಳಕಂಡಂತಿದೆ.

ಕ್ರ. ಸಂ.	ಕಾಲೇಜಿನ ಹೆಸರು	ಖಾಲಿ ಇರುವ ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ	ಖಾಲಿ ಇರುವ ವೈದ್ಯರ ಸಂಖ್ಯೆ
1.	ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ	25	01
2	ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ	00	38
3	ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ	00	48
4	ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು	05	38
5	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್	00	01
6	ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ	20	46

ಸದರಿ ಕಾಲೇಜುಗಳ ಖಾಲಿಯಿರುವ ಹುದ್ದೆಗಳನ್ನು ಕಾಲ ಕಾಲಕ್ಕೆ ನೇರ ಸಂದರ್ಶನಗಳ ಮುಖಾಂತರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆ